# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ-ಮೇಲ್ ವಿಳಾಸ : director.ahr.kptcl@gmail.com

ಸಂಖ್ಯೆ:ಕವಿಪ್ರನಿನಿ/ಕಛ/ಸ/20510/2021-22 ದಿನಾಂಕ: 30 MAR 2024

ಲಗತ್ತು : 07 ಪುಟಗಳು

## ಸುತ್ತೋಲೆ

ವಿಷಯ : ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾ ಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ:1. ಈ ನಿಗಮದ ಸುತ್ತೋಲೆ ಸಂಖ್ಯೆ : ಕವಿಪ್ರನಿನಿ / ಕ.ಛ/ ಸ/ 20510/ 2015-16, ದಿನಾಂಕ: 04-09-2017, 12-02-2018, 05-05-2018, 19-05-2018, 22-05-2018, 03-02-2021 ಹಾಗೂ 23-09-2021.

2. ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, (ಆಡಳಿತ ಕನ್ನಡ) ರವರ ಪತ್ರ ಸಂಖ್ಯೆ: ಕಸಂವಾ 01 ಕಸಧ 2024, ದಿನಾಂಕ: 11-03-2024.
3. ಕಾರ್ಯದರ್ಶಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ವಿಧೇಯಕ ರಾಜ್ಯ ಮಟ್ಟದ ಸಮಿತಿಯ ಸಂಚಾಲಕರು ಇವರ ಪತ್ರ ಸಂಖ್ಯೆ: ಕಅಪ್ರಾ/ಕಾ-1/ 02/ಇತರೆ/ 2021-22(ಭಾಗ-2)/756 ದಿನಾಂಕ: 15-03-2024.

ಕರ್ನಾಟಕ ಸರ್ಕಾರವು, ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು, ಕನ್ನಡಿಗರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸುವುದಕ್ಕಾಗಿ ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾ ಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಹೊರಡಿಸಿರುವ ಅಧಿಸೂಚನೆ ದಿನಾಂಕ: 26-02-2024 ರ ಪ್ರತಿ ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-2022ರ ಅನುಷ್ಠಾನದ ಕುರಿತು ಹೊರಡಿಸಲಾಗಿರುವ ಟಿಪ್ಪಣಿ ದಿನಾಂಕ: 15-03-2024ರ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸುತ್ತಾ ಎಲ್ಲಾ ಕಚೇರಿಗಳ ಮುಖ್ಯಸ್ಥರು ಮೇಲೆ ತಿಳಿಸಲಾದ ಅಧಿಸೂಚನೆ ಹಾಗೂ ಟಿಪ್ಪಣಿಯ ಆಶಯಗಳನ್ನು ತಮ್ಮ ಆಡಳಿತ ವ್ಯಾಪ್ತಿಯ ಕಚೇರಿಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ಕವಿಪ್ರನಿನಿ

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಧೀನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ವಾರ್ತಾ ಇಲಾಖೆ (ಆಡಳಿತ ಕನ್ನಡ), ಬೆಂಗಳೂರು.
2. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಕರ್ನಾಟಕ ಸರ್ಕಾರ, ಬೆಂಗಳೂರು.
3. ಜಂಟಿ ಕಾರ್ಯದರ್ಶಿ (ಆಡಳಿ), ಸಾರ್ವಜನಿಕ ಉದ್ದಿಮೆಗಳ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಾಯ 2ನೇ ಹಂತ, 7ನೇ ಮಹಡಿ, ಬಹು ಮಹಡಿ ಕಟ್ಟಡ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->e prasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

**ನಿಗಮ ಸುತ್ತೋಲೆಯಂತೆ ಕ್ರಮವಹಿಸಿ ಪ್ರತಿ ತಿಂಗಳು ಪ್ರಗತಿಯ ಕ್ರೋಢಿಕೃತ ವರದಿಯನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸಲು ಸೂಚಿಸಿದೆ.**

1. ಎಲ್ಲಾ ಮುಖ್ಯ ಇಂಜಿನಿಯರ್ (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ
3. ಆಡಳಿತಾಧಿಕಾರಿ (ಮಾ.ಸಂ.ಅ.ಕೇಂದ್ರ) ಹೂಡಿ, ಕವಿಪ್ರನಿನಿ, ಬೆಂಗಳೂರು-48
4. ಉಪ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ), ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ) ಹಾಗೂ (ಎಪಿಸಿಸಿ)
6. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.
7. ಅಧೀಕ್ಷಕ ಇಂಜಿನಿಯರ್ (ಐ.ಟಿ.ಮತ್ತು ಎಂ.ಐ.ಎಸ್) ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
9. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.)/ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ ರವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಬೆಂಗಳೂರು.
10. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯಯರ್, ಸಾರಿಗೆ ಉಪವಿಭಾಗ, ಕವಿಪ್ರನಿನಿ ರಾಜಾಜಿನಗರ, ಬೆಂಗಳೂರು-10
11. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಕವಿಪ್ರನಿನಿ

**ಮಾಹಿತಿಗಾಗಿ:**

1. ಶ್ರೀ ಆರ್.ಹೆಚ್ ಲಕ್ಷ್ಮಿಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ & ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು
2. ಶ್ರೀ ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ./ಪ.ಪಂ.ಅಧಿಕಾರಿಗಳ ಸಂಘ, ಬೆಂಗಳೂರು.

Gmail

**Director KPTCL <director.ahr.kptcl@gmail.com>**

---

# Fwd: ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಆಡಳಿತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು.

1 message

---

**MD KPTCL** <md@kptcl.com> Sat, Mar 16, 2024 at 5:11 PM
To: "DIRECTOR (A & HR)" <director.ahr.kptcl@gmail.com>, "KPTCL DGM (P)" <dgmpkptcl@gmail.com>, agmserviceskptcl@gmail.com, agmadmnkptcl@gmail.com

---------- Forwarded message ---------
From: ಕನ್ನಡ ಅಭಿವೃದ್ಧಿ ಪ್ರಾಧಿಕಾರ <secretary.kanpra@gmail.com>
Date: Sat, Mar 16, 2024 at 3:43 PM
Subject: ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಆಡಳಿತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು.
To:

**ಮಾನ್ಯರೇ,**

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು, ಕನ್ನಡಿಗರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸುವುದಕ್ಕಾಗಿ ಹಾಗೂ ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾ ಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಉಲ್ಲೇಖದಲ್ಲಿ ಹೊರಡಿಸಿರುವ ಅಧಿಸೂಚನೆ ಪ್ರತಿಯನ್ನು ಹಾಗೂ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕದ ಪ್ರತಿಗಳನ್ನು ಕಳುಹಿಸಿಕೊಡಲಾಗಿದೆ. ಈ ಅಧಿಸೂಚನೆಯ ಆಶಯಗಳನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಈ ಮೂಲಕ ಕೋರಿದೆ.

**ವಂದನೆಗಳೊಂದಿಗೆ,**

***ನಿರಂತರ ಕನ್ನಡ ಕಲಿಕೆ, ನಿರಂತರ ಕನ್ನಡ ಬಳಕೆ, ಇದು ನಮ್ಮ ಕನ್ನಡ ಕಾಯಕ.***

**ಕಾರ್ಯದರ್ಶಿ ಕಾರ್ಯಾಲಯ,**
**ಕನ್ನಡ ಅಭಿವೃದ್ಧಿ ಪ್ರಾಧಿಕಾರ,**
**ವಿಧಾನಸೌಧ, ಬೆಂಗಳೂರು-560001. ದೂ. ಸಂ:080 22286773/ 22370237/ 8088179269**

--
**PANKAJ KUMAR PANDEY**, IAS.,
Managing Director,
Karnataka Power Transmission Corporation Limited.
+919900095440

View photo in message

---

**4 attachments**

**SKM_36724031513470.pdf**
795K

**ಅಧಿಸೂಚನೆ.pdf**
286K

**2024.pdf**
1339K

ನಿರ್ದೇಶಕರು
(ಆಡಳಿತ & ಮಾ.ಸಂ)

20/3/24

AGM(S)

# ಕರ್ನಾಟಕ ಸರ್ಕಾರ

ಸಂಖ್ಯೆ:ಕಸಂವಾ 01 ಕಸಧ 2024

ಕರ್ನಾಟಕ ಸರ್ಕಾದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:11.03.2024

## ಅಧಿಸೂಚನೆ

1. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022 (2023ರ ಕರ್ನಾಟಕ ಅಧಿನಿಯಮ ಸಂಖ್ಯೆ:13) ರ 1ನೇ ಪ್ರಕರಣದ (2)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧಿನಿಯಮದ ಎಲ್ಲಾ ಉಪಬಂಧಗಳು ದಿನಾಂಕ:12.03.2024 ರಿಂದ ಜಾರಿಗೆ ಬರತಕ್ಕದೆಂದು ಗೊತ್ತುಪಡಿಸುತ್ತದೆ.

2. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ:7) ರ 1ನೇ ಪ್ರಕರಣದ (2)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ತಿದ್ದುಪಡಿ ಅಧಿನಿಯಮದ ಉಪಬಂಧಗಳು ದಿನಾಂಕ:12.03.2024 ರಿಂದ ಜಾರಿಗೆ ಬರತಕ್ಕದೆಂದು ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ರಮೇಶ್ 11/03/2024

**(ಕೆ.ಆರ್. ರಮೇಶ್)**
ಸರ್ಕಾರದ ಅಧೀನ ಕಾರ್ಯದರ್ಶಿ ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
(ಆಡಳಿತ ಕನ್ನಡ)

**ಇವರಿಗೆ:**

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಅಧಿಸೂಚನೆಯನ್ನು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಇಲಾಖೆಗೆ ಒದಗಿಸುವಂತೆ ಕೋರಿದೆ.

**ಪ್ರತಿ:**

1. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ ರಸ್ತೆ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
8. ಸರ್ಕಾರದ ಅಪರ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ.
9. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.

ಡಾ. ಸಂತೋಷ ಹಾನಗಲ್ಲ
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ದೂರವಾಣಿ : ಕಛೇರಿ : ೦೮೦-೨೨೨೮೬೭೭೩
೨೨೦೩೩೨೩೪
ಕೊಠಡಿ ಸಂಖ್ಯೆ : ೨೬೩, ಎರಡನೇ ಮಹಡಿ,
ವಿಧಾನಸೌಧ, ಬೆಂಗಳೂರು-೫೬೦ ೦೦೧

ಸಂಖ್ಯೆ:ಕಅಪ್ರಾ/ಕಾ-1/02/ಇತರೆ/2021-22(ಭಾಗ-2) 1756

ದಿನಾಂಕ 15.03.2024

## ಟಿಪ್ಪಣಿ

ವಿಷಯ:- ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ – 2022 ರ ಅನುಷ್ಠಾನದ ಕುರಿತು.

ಉಲ್ಲೇಖ:-
1. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ - 2022
2. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ – 2024
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಸಂವಾ 01 ಕಸಧ 2024, ದಿನಾಂಕ 11.03.2024.

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕನ್ನಡ ಭಾಷೆಯನ್ನು ಸಾಂವಿಧಾನಿಕ ಚೌಕಟ್ಟಿನಲ್ಲಿ ಉಳಿಸುವ, ಬೆಳೆಸುವ ಮಹತ್ತರ ಜವಾಬ್ದಾರಿಯನ್ನು ಹೊಂದಿರುವ ಕರ್ನಾಟಕ ಸರ್ಕಾರದ ಏಕೈಕ ಸಂವಿಧಾನ ಬದ್ಧ ಸಂಸ್ಥೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ. ಕನ್ನಡ ಭಾಷೆ ಮತ್ತು ಕನ್ನಡಿಗರ ಹಿತಾಸಕ್ತಿಯನ್ನು ಕಾನೂನಿನ್ವಯ ಸಂರಕ್ಷಿಸುವ ಸಲುವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿರುತ್ತದೆ. ಕನ್ನಡ ಭಾಷೆಯ ಸಮಗ್ರ ಬೆಳವಣಿಗಾಗಿ ಆಡಳಿತದಲ್ಲಿ ಕನ್ನಡ ಅನುಷ್ಠಾನದ ಪ್ರಾಥಮಿಕ ಜವಾಬ್ದಾರಿಯನ್ನು ನಿರ್ವಹಿಸುತ್ತಾ, ಕನ್ನಡವನ್ನು ಜನಸಮುದಾಯದ ಸಮೀಪಕ್ಕೆ ಕೊಂಡೊಯ್ಯುವ ರಚನಾತ್ಮಕ ಕೆಲಸವನ್ನು ಮಾಡುತ್ತಾ ಬಂದಿದೆ.

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದು, ಕನ್ನಡಿಗರ ಜೀವನದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸುವುದಕ್ಕಾಗಿ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 28 ಶಾಸನ 2022, ದಿನಾಂಕ 10.03.2023 ರಂತೆ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ – 2022 ಹಾಗೂ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 01 ಶಾಸನ 2024, ದಿನಾಂಕ 26.02.2024 ರಂತೆ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ – 2024 ಕಾಯ್ದೆಗಳನ್ನು ರಾಜ್ಯ ಸರ್ಕಾರ ಜಾರಿಗೆ ತಂದಿರುತ್ತದೆ. ಸದರಿ ಅಧಿನಿಯಮಗಳ ಎಲ್ಲಾ ಉಪಬಂಧಗಳು ದಿನಾಂಕ 12.03.2024 ರಿಂದ ಜಾರಿಗೊಳಿಸಲಾಗಿರುತ್ತದೆ.

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳನ್ನು ಕಲ್ಪಿಸಲು ಅನುಕೂಲವಾಗುವಂತೆ ತಮ್ಮ ಆಡಳಿತಾತ್ಮಕ ಇಲಾಖೆಗಳಿಗೆ, ಮಂಡಳಿಗಳು / ನಿಗಮ / ಪ್ರಾಧಿಕಾರ/ ಸೊಸೈಟಿಗಳು / ಸ್ವಾಯತ್ತ ಸಂಸ್ಥೆಗಳಿಗೆ, ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಚೇರಿಗಳಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ ಅಧಿನಿಯಮವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಈ ಮೂಲಕ ಕೋರಿದೆ.

ತಮ್ಮ ವಿಶ್ವಾಸಿ,

**ಕಾರ್ಯದರ್ಶಿ**
ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ
ವಿಧೇಯಕ ರಾಜ್ಯ ಮಟ್ಟದ ಸಮಿತಿಯ ಸಂಚಾಲಕರು

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ವಿಧಾನಸೌಧ, ವಿಕಾಸಸೌಧ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು / ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
3. ರಾಜ್ಯದ ಎಲ್ಲಾ 'ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ನಿಗಮ / ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರುಗಳು
5. ರಾಜ್ಯದ ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು

**ಪ್ರತಿ:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಸಲ್ಲಿಸುತ್ತಾ, ಸದರಿ ಮಾಹಿತಿಯನ್ನು ಮಾನ್ಯ ಸಚಿವರು ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಅವಗಾಹನೆಗೆ ತರಲು ಕೋರಲಾಗಿದೆ.
2. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿ.

ಮಿಂಚಂಚೆ ವಿಳಾಸ : secretary.kanpra@gmail.com ಜಾಲತಾಣ ವಿಳಾಸ : kannadapraadhikaara.karnataka.gov.in

# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ಎ<br>Part – IV A | ಬೆಂಗಳೂರು, ಸೋಮವಾರ, ೨೬, ಫೆಬ್ರವರಿ, ೨೦೨೪(ಫಾಲ್ಗುಣ, ೦೭, ಶಕವರ್ಷ, ೧೯೪೫)<br>BENGALURU, MONDAY, 26, FEBRUARY, 2024(PHALGUNA , 07, SHAKAVARSHA, 1945) | ನಂ. ೧೧೩<br>No. 113 |
|---|---|---|


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 01 ಶಾಸನ 2024, ದಿನಾಂಕ: 26.02.2024**

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ )ವಿಧೇಯಕ, 2024 ಇದಕ್ಕೆ 2024 ರ ಫೆಬ್ರುವರಿ ತಿಂಗಳ 25ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2024 ರ ಕರ್ನಾಟಕ ಅಧಿನಿಯಮ ಸಂಖ್ಯೆ: 07 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2024 ರ ಕರ್ನಾಟಕ ಅಧಿನಿಯಮ ಸಂಖ್ಯೆ: 07**

(2024 ರ ಫೆಬ್ರುವರಿ ತಿಂಗಳ 26ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ)ಅಧಿನಿಯಮ, 2024**

(2024 ರ ಫೆಬ್ರುವರಿ ತಿಂಗಳ 25ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು (2023ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆಬರತಕ್ಕದ್ದು.

**2. 7ನೇ ಪ್ರಕರಣದ ತಿದ್ದುಪಡಿ.-** ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022ನ್ನು (2023ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ರ (ಇದರಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 7ನೇ ಪ್ರಕರಣದ, (2)ನೇ ಉಪಪ್ರಕರಣದಲ್ಲಿರುವ (ಎ) ಖಂಡದ (vii)ನೇ ಬಾಬುವಿಗೆ ಬದಲಾಗಿ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(vii) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ – ಸದಸ್ಯ

(vii-ಎ) ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಇವರು ಸಮಿತಿಯ ಸಂಚಾಲಕರಾಗಿರತಕ್ಕದ್ದು."

**3. 17ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 17ನೇ ಪ್ರಕರಣದಲ್ಲಿನ (6)ನೇ ಉಪಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(6) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು ಮತ್ತು ಹೋಟೆಲ್‌ಗಳು ಮುಂತಾದವುಗಳು ತಮ್ಮ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು 60% ರಷ್ಟು ಪ್ರದರ್ಶಿಸಲಾಗಿದೆ ಮತ್ತು ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿತವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 01 SHASANA 2024, DATED:26.02.2024**

ಭಾರತ ಸಂವಿಧಾನದ ಅನುಚ್ಛೇದ 348 ರ ಖಂಡ (1)ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕನ್ನಡ ಭಾಷಾ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ: 07)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

# KARNATAKA ACT NO. 07 OF 2024

(First Published in the Karnataka Gazette Extra-ordinary on the 26th day of February, 2024)

## THE KANNADA LANGUAGE COMPREHENSIVE DEVELOPMENT (AMENDMENT) ACT, 2024

(Received the assent of the Governor on the 25th day of February, 2024)

An Act to amend the Kannada Language Comprehensive Development Act, 2022 (Karnataka Act 13 of 2023).

Whereas it is expedient to amend the Kannada Language Comprehensive Development Act, 2022 (Karnataka Act 13 of 2023), for the purposes hereinafter appearing;

Be it enacted by the Karnataka State Legislature in the seventy fifth year of the Republic of India, as follows:-

**1. Short title and commencement.-** (1) This Act may be called the Kannada Language Comprehensive Development (Amendment) Act, 2024.

(2) It shall come into force on such date as the State Government may by notification in the Official Gazette appoint.

**2. Amendment of section 7.-** In the Kannada Language Comprehensive Development Act, 2022 (Karnataka Act 13 of 2023), (herein after referred to as the Principal Act) in section 7, in sub-section (2), in clause (a), for item (vii), the following shall be substituted , namely:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



"(vii) The Director, Directorate of Kannada and Culture -

Member

(vii-a) The Secretary, Kannada Development Authority shall be

the convener of the Committee."

**3. Amendment of section 17.-** In section 17 of the Principal Act, for sub-section (6), the following shall be substituted , namely:-

"(6) The name boards of Commercial, Industrial and Business Undertakings, Trusts, Counseling Centre's, Hospitals, Laboratories, Amusement Centers and Hotels etc., functioning with the approval and sanction of the Government or Local Authorities, shall ensure that their name board displays 60% in Kannada language and Kannada shall be displayed in the upper half of the name board".

The above translation of ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಅಧಿನಿಯಮ, 2024 (2024ರ ಕರ್ನಾಟಕ ಅಧಿನಿಯಮ ಸಂಖ್ಯೆ: 07) into English language be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH